22/12/22
148th, ಕ್ರ.ಸಂ. 18

# ಕರ್ನಾಟಕ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಎಸ್.ಎಲ್.ಭೋಜೇಗೌಡ ಇವರ ಶೂನ್ಯ ವೇಳೆಗೆ ಉತ್ತರಿಸುವ ಬಗ್ಗೆ.

**ವಿಷಯ:**

ಬೆಂಗಳೂರು ವಿಶ್ವವಿದ್ಯಾಲಯವು (ಜ್ಞಾನಭಾರತಿಯು) ಹಲವಾರು ಕಾರಣಗಳಿಂದ ಕೋರ್ಸ್ ಮುಗಿಸಿದ್ದೂ, ಪದವಿ ಪಡೆಯಲು ಸಾಧ್ಯವಾಗದೇ ಇರುವಂತಹ ವಿದ್ಯಾರ್ಥಿಗಳಿಗೆ ಫೇಲಾದವರಿಗೆ ಮತ್ತೆ ಪರೀಕ್ಷೆ ಬರೆಯಲು ಅವಕಾಶ ನೀಡಿರುವುದು ನಿಜಕ್ಕೂ ಸ್ವಾಗತಾರ್ಹವಾಗಿದೆ.

ಈ ವಿಷಯವು ದಿನಾಂಕ.16.11.2022 ರ ವಿಜಯ ಕರ್ನಾಟಕ ದಿನಪತ್ರಿಕೆಯ ಪುಟ ಕ್ರಮ ಸಂಖ್ಯೆ 10 ರಲ್ಲಿ ಫೇಲಾದವರಿಗೆ ಮತ್ತೆ ಪರೀಕ್ಷೆ ಬರೆಯಲು ಅವಕಾಶ ಎಂಬ ಶೀರ್ಷಿಕೆಯಡಿ ಪ್ರಕಟವಾಗಿರುತ್ತದೆ.

ಬೆಂಗಳೂರು ವಿಶ್ವವಿದ್ಯಾಲಯವು (ಜ್ಞಾನಭಾರತಿ), ವ್ಯಾಪ್ತಿಯಲ್ಲಿ ಬರುವ ಕಾನೂನು ಕಾಲೇಜುಗಳಲ್ಲಿ ಈ ಹಿಂದೆ 1999 ರಿಂದ ದಾಖಲಾತಿ ಹೊಂದಿ ಕೋರ್ಸು ಮುಗಿಸಿ ಪದವಿ ಪಡೆಯಲು ಸಾಧ್ಯವಾಗದ ಕಾನೂನು ವಿದ್ಯಾರ್ಥಿಗಳಿಗೆ ಈ ಸಾಲಿನ ಜುಲೈ ಮತ್ತು ಆಗಸ್ಟ್‌ನಲ್ಲಿ ಒಂದು ಬಾರಿಯ ಕ್ರಮವಾಗಿ ಪರೀಕ್ಷೆ ನೀಡಿರುವುದು ಅಭಿನಂದನೀಯವಾಗಿರುತ್ತದೆ. "ಈ ಪರೀಕ್ಷೆಯಲ್ಲಿ ಹಾಜರಾಗಿ ಒಂದು ಅಥವಾ ಎರಡು ಮೂರು ವಿಷಯಗಳು ಬಾಕಿ ಇರುವ ವಿದ್ಯಾರ್ಥಿಗಳಿಗೆ ಪೂರಕ ಪರೀಕ್ಷೆಯನ್ನು ಕೊಡಬೇಕೆಂದು ಸರ್ಕಾರ ಮತ್ತು ವಿಶ್ವವಿದ್ಯಾಲಯವನ್ನು ಒತ್ತಾಯಿಸುತ್ತಾ ಮತ್ತೊಮ್ಮೆ ಸರ್ಕಾರ ಹಾಗೂ ಬೆಂಗಳೂರು ವಿಶ್ವವಿದ್ಯಾಲಯ (ಜ್ಞಾನಭಾರತಿ) ನ್ನು ಅಭಿನಂದಿಸುತ್ತೇನೆ.

ಈ ಕಾಲಘಟದಲ್ಲಿ ಕಾನೂನು ಪದವಿಯನ್ನು ಅಭ್ಯಾಸ ಮಾಡುವವರ ಸಂಖ್ಯೆಯು ಕಡಿಮೆ ಇರುವುದರಿಂದ ಪರೀಕ್ಷೆಯಲ್ಲಿ ಹಾಜರಾದವರಿಗೆ ಪೂರಕ ಪರೀಕ್ಷೆಯನ್ನು ನೀಡಿ, ವಿದ್ಯಾರ್ಥಿಗಳಿಗೆ ಅನುಕೂಲ ಮಾಡಿಕೊಡಬೇಕೆಂದು ಮತ್ತು ಈ ರೀತಿಯ ಅವಕಾಶವನ್ನು ಎಲ್ಲಾ ವಿಶ್ವವಿದ್ಯಾಲಯಗಳು ಅವರ ವ್ಯಾಪ್ತಿಯ ವಿದ್ಯಾರ್ಥಿಗಳಿಗೆ ನೀಡುವಂತೆ ಸರ್ಕಾರ ಆದೇಶ ಹೊರಡಿಸಬೇಕೆಂದು ಮಾನ್ಯ ಉನ್ನತ ಶಿಕ್ಷಣ ಸಚಿವರಲ್ಲಿ ಶೂನ್ಯ ವೇಳೆಯಲ್ಲಿ ಪ್ರಸ್ತಾಪಿಸ ಬಯಸುತ್ತೇನೆ.

**ಉತ್ತರ:**

ಬೆಂಗಳೂರು ವಿಶ್ವವಿದ್ಯಾಲಯದಲ್ಲಿ 2000ನೇ ಸಾಲಿನಲ್ಲಿ ದಾಖಲಾತಿ ಹೊಂದಿ ಕಾನೂನು ಪದವಿ ಪೂರ್ಣಗೊಳಿಸಲು ಸಾಧ್ಯವಾಗದೇ ಇರುವ ಕಾನೂನು ಪದವಿ ವಿದ್ಯಾರ್ಥಿಗಳಿಗೆ ದಿನಾಂಕ: 17-11-2020ರ ವಿದ್ಯಾವಿಷಯಕ ಪರಿಷತ್ತಿನ ಸಭೆಯ ನಿರ್ಣಯದ ಅನುಸಾರ ದಿನಾಂಕ: 19-07-2022ರ ಪರೀಕ್ಷಾ ವೇಳಾಪಟ್ಟಿಯಂತೆ ಕಾನೂನು ಪದವಿ ಪರೀಕ್ಷೆಗಳನ್ನು ಒಂದು ಬಾರಿ ಕ್ರಮವೆಂದು ಪರೀಕ್ಷೆ ನಡೆಸಲಾಗಿದೆ. ಈ ಪರೀಕ್ಷೆಯಲ್ಲಿ ಅನುತ್ತೀರ್ಣಗೊಂಡಿರುವ ವಿದ್ಯಾರ್ಥಿಗಳಿಗೆ ಪೂರಕ ಪರೀಕ್ಷೆಗಳನ್ನು ನಡೆಸಲು ಅವಕಾಶವಿರುವುದಿಲ್ಲ.

ಯುಜಿಸಿಯು ದಿನಾಂಕ:15.10.2015ರಲ್ಲಿ ಹೊರಡಿಸಿರುವ UGC Guidelines on Determination of a uniform span period within which a student may be allowed to qualify for a degree ಕುರಿತು ಈ ಕೆಳಕಂಡಂತೆ ತಿಳಿಸಲಾಗಿದೆ.

a) Time Span=N+2 years for the completion of programme. Where N stands for the normal or minimum duration prescribed for completion of the programme.
b) In exceptional circumstances a further extension of one more year may be granted. The exceptional circumstances be spelt out clearly by the relevant statutory body concerned of the University.
c) During the extended period the student shall be considered as a private candidate and also not be eligible for ranking.

....2

ಆದುದರಿಂದ, ಯುಜಿಸಿಯು ದಿನಾಂಕ:15.10.2015ರಲ್ಲಿ ಹೊರಡಿಸಿರುವ ಮಾರ್ಗಸೂಚಿಯಲ್ಲಿ ಕಲ್ಪಿಸಿರುವ ಅವಕಾಶಕ್ಕಿಂತ ಹೆಚ್ಚಿನ ಅವಧಿಗೆ ಒಂದು ಅಥವಾ ಎರಡು - ಮೂರು ವಿಷಯಗಳು ಬಾಕಿ ಇರುವ ವಿದ್ಯಾರ್ಥಿಗಳಿಗೆ ಪೂರಕ ಪರೀಕ್ಷೆಯನ್ನು ಉನ್ನತ ಶಿಕ್ಷಣ ಇಲಾಖೆಯಡಿ ಬರುವ ಸಾರ್ವಜನಿಕ ವಿಶ್ವವಿದ್ಯಾಲಯಗಳಲ್ಲಿ ನಡೆಸಲು ಅವಕಾಶವಿರುವುದಿಲ್ಲ.

ಸಂಖ್ಯೆ: ಇಡಿ 347 ಯುಎನ್ಇ 2022

(ಡಾ: ಅಶ್ವಥ್ ನಾರಾಯಣ ಸಿ.ಎನ್)
ಉನ್ನತ ಶಿಕ್ಷಣ, ಐಟಿ ಬಿಟಿ, ವಿಜ್ಞಾನ ಮತ್ತು
ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ,
ಉದ್ಯಮಶೀಲತೆ ಮತ್ತು ಜೀವನೋಪಾಯ
ಸಚಿವರು